# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1100 (1198)**

**ಸದಸ್ಯರ ಹೆಸರು:** ಶ್ರೀ ಎಂ. ನಾಗರಾಜು

**ಉತ್ತರಿಸುವ ಸಚಿವರು:** ಕಂದಾಯ ಸಚಿವರು

**ಉತ್ತರಿಸುವ ದಿನಾಂಕ:** 17.12.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ತಹಸೀಲ್ದಾರ್ ಮತ್ತು ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ ಮಟ್ಟದಲ್ಲಿ ಕಂದಾಯ ನ್ಯಾಯಾಲಯದ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸರ್ಕಾರ/ ಇಲಾಖೆ ಕೈಗೊಂಡಿರುವ ಕ್ರಮಗಳು ಯಾವುವು; ಈ ಪ್ರಕರಣಗಳನ್ನು ನಿರ್ದಿಷ್ಟ ಕಾಲಾವಧಿಯೊಳಗೆ ವಿಲೇ ಗೊಳಿಸಲು ಇಲಾಖೆ ವತಿಯಿಂದ ನಿಯಮಗಳನ್ನು ರೂಪಿಸಲಾಗಿದೆಯೇ; | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಅಧ್ಯಾಯ III, V, VI, XI, ಹಾಗೂ ಕರ್ನಾಟಕ ಭೂಕಂದಾಯ ನಿಯಮಗಳು, 1966ರ ಅಧ್ಯಾಯ III, V, VIII, IX, XIII-A ರಲ್ಲಿ ಕಂದಾಯ ನ್ಯಾಯಾಲಯಗಳ ವಿಷಯ ವ್ಯಾಪ್ತಿ, ಅಧಿಕಾರ ವ್ಯಾಪ್ತಿ, ನಿರ್ವಹಣೆಗೆ ಸಂಬಂಧಿಸಿದ ಉಪಬಂಧಗಳನ್ನು ಕಲ್ಪಿಸಲಾಗಿರುತ್ತದೆ.<br><br>ಅದರಂತೆ ಕಂದಾಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡುವ ಸಂಬಂಧ ಸರ್ಕಾರದಿಂದ ಈ ಕೆಳಕಂಡಂತೆ ಹಲವು ಕ್ರಮಗಳನ್ನು ಕೈಗೊಳ್ಳಲು ನಿರ್ದೇಶನವನ್ನು ನೀಡಲಾಗಿರುತ್ತದೆ.<br><br>• ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 193 ಟಿಆರ್‌ಎಂ 2019, ದಿನಾಂಕ:18.02.2021ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಆಸ್ತಿಯ ಹಕ್ಕಿನ ಹೊರತಾದ ವಿವಾದಿತ ಪ್ರಕರಣಗಳನ್ನು ತಹಶೀಲ್ದಾರ್‌ರವರು ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 129ರಡಿ ಮೂರು (3) ತಿಂಗಳೊಳಗೆ ಇತ್ಯರ್ಥಪಡಿಸುವಂತೆ ಹಾಗೂ ಸದರಿ ಕಾಯ್ದೆಯ ಕಲಂ 136(2) ಹಾಗೂ 136(3)ರ (ಅಪೀಲು/ಪುನರೀಕ್ಷಣೆ) ಅಡಿಯಲ್ಲಿ ಕ್ರಮವಾಗಿ ಉಪ ವಿಭಾಗಾಧಿಕಾರಿ ಮತ್ತು ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗುವ ಮೇಲ್ಮನವಿ ಪ್ರಕರಣಗಳನ್ನು ಎದುರುದಾರರಿಗೆ ನೋಟೀಸು ನೀಡಿದ ದಿನದಿಂದ ಆರು (06) ತಿಂಗಳ ಒಳಗಾಗಿ ಇತ್ಯರ್ಥಪಡಿಸುವಂತೆ ಕಾಲಮಿತಿ ನಿಗದಿಪಡಿಸಿದೆ. |

| | | |
|---|---|---|
| | | • ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 17 ಟೀಆರ್‌ಎಂ 2021, ದಿನಾಂಕ: 22.02.2021ರ ಹಾಗೂ ಸುತ್ತೋಲೆ ಸಂಖ್ಯೆ:ಕಂಇ 118 ಟೀಆರ್‌ಎಂ 2023 (ಭಾ-1), ದಿನಾಂಕ: 26.08.2024ರಲ್ಲಿ ವಾರದ ಪ್ರತಿ ಮಂಗಳವಾರ, ಗುರುವಾರಗಳ ಜೊತೆಗೆ ಮತ್ತೊಂದು ಸೂಕ್ತ ದಿನವನ್ನು ಸೇರಿಸಿಕೊಂಡು ಒಟ್ಟು 3 ದಿನಗಳು ಕಡ್ಡಾಯವಾಗಿ ಕಂದಾಯ ಅರೆ ನ್ಯಾಯಿಕ ಪ್ರಕರಣಗಳ ವಿಚಾರಣೆ ನಡೆಸಿ, ಪ್ರಕರಣಗಳ ಶೀಘ್ರ ವಿಲೇವಾರಿ ಮಾಡಲು ಹಲವು ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.<br>• ಮುಂದುವರೆದು, ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿ ಇರುವ ತಕರಾರು ಪ್ರಕರಣಗಳ ಸಂಖ್ಯೆಯು ಹೆಚ್ಚಾಗಿದ್ದಲ್ಲಿ ಅಂತಹ ಕಡೆಗಳಲ್ಲಿ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಂದಾಯ ನಿಯಮಗಳು, 1964ರ ನಿಯಮ 43(3) ಮತ್ತು 69ರಲ್ಲಿ "ಅಸಿಸ್ಟೆಂಟ್ ಕಮಿಶನರ್" ಪದದ ನಂತರ "ಅಥವಾ ಸರ್ಕಾರದಿಂದ ಕಾಲಕಾಲಕ್ಕೆ ಅಧಿಸೂಚಿಸುವ ಅಸಿಸ್ಟೆಂಟ್ ಕಮೀಶನರಿಗೆ ಸಮಾನ ದರ್ಜೆಯ ಅಧಿಕಾರಿ" ಎಂದು ತಿದ್ದುಪಡಿ ಮಾಡಿ ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 13 ಎಲ್‌ಜಿಪಿ 2022, ದಿನಾಂಕ: 03.11.2022ರಲ್ಲಿ ಆದೇಶಿಸಲಾಗಿದೆ.<br>• ಅಧಿಸೂಚನೆ ಸಂಖ್ಯೆ: RD 188 TRM 2023ಯನ್ವಯ ಹೆಚ್ಚು ಪ್ರಕರಣಗಳು ಬಾಕಿ ಇರುವ ಜಿಲ್ಲೆಗಳಲ್ಲಿನ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಮೇಲ್ಮನವಿ ಪ್ರಕರಣಗಳನ್ನು ಉಪ ವಿಭಾಗಾಧಿಕಾರಿ ವೃಂದಕ್ಕೆ ಸಮಾನಾಂತರ ವೃಂದದ ಇತರೆ ಅಧಿಕಾರಿಗಳಿಗೆ ಕಾರ್ಯಹಂಚಿಕೆ ಮಾಡಿ ದಿನಾಂಕ:10.01.2024, 25.01.2024, 12.03.2024, 01.04.2024, 10.09.2024, 25.09.2025, 24.11.2025 & 04.12.2025ಗಳಂದು ಅಧಿಸೂಚನೆಗಳನ್ನು ಹೊರಡಿಸಲಾಗಿರುತ್ತದೆ.<br>• ಕಂದಾಯ ನ್ಯಾಯಾಲಯಗಳ ನಿರ್ವಹಣೆಯಲ್ಲಿ ಪಾರದರ್ಶಕತೆ, ದಕ್ಷತೆ, ಸಕಾಲಿಕ ವಿಲೇವಾರಿ ಮತ್ತು ಲಭ್ಯತೆಯ ಹಿತದೃಷ್ಟಿಯಿಂದ ಡಿಜಿಟಲ್ ಸಹಿ ಅಥವಾ ಸಮಾನವಾದ ಕಾನೂನು ಬದ್ಧವಾಗಿ ಗುರುತಿಸಲ್ಪಟ್ಟ ಎಲೆಕ್ಟ್ರಾನಿಕ್ ವಿಧಾನಗಳಿಂದ ದೃಢೀಕರಣದೊಂದಿಗೆ ಕೇಂದ್ರೀಕೃತ ವೇದಿಕೆಯ ಮೂಲಕ ಅಂತಹ ಎಲ್ಲಾ ಎರಡು ಪ್ರಕ್ರಿಯೆಗಳ ಆನ್‌ಲೈನ್ ಫೈಲಿಂಗ್ ಮತ್ತು ಎಲೆಕ್ಟ್ರಾನಿಕ್ ನಿರ್ವಹಣೆಯನ್ನು ಒದಗಿಸುವುದು ಸೂಕ್ತವೆಂದು |

| | | |
|---|---|---|
| | | ಪರಿಗಣಿಸಿ ಕರ್ನಾಟಕ ಕಂದಾಯ ನ್ಯಾಯಾಲಯದ ನಡವಳಿಗಳು (ಆನ್‌ಲೈನ್ ಸಲ್ಲಿಕೆ, ಡಿಜಿಟಲ್ ದೃಢೀಕರಣ ಮತ್ತು ಡಿಜಿಟಲೀಕರಣ) ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 203 ಎಂಆರ್‌ಆರ್ 2025, ದಿನಾಂಕ: 29.08.2025ನ್ನು ಹೊರಡಿಸಲಾಗಿರುತ್ತದೆ. ಇದರಿಂದಾಗಿ ಕಂದಾಯ ನ್ಯಾಯಾಲಯಗಳ ನಿರ್ವಹಣೆಯನ್ನು ಕಡ್ಡಾಯವಾಗಿ ಆರ್‌ಸಿಸಿಎಂಎಸ್ ತಂತ್ರಾಂಶದಲ್ಲಿಯೇ ನಿರ್ವಹಿಸುವಂತೆ ನಿರ್ದೇಶಿಸಲಾಗಿರುತ್ತದೆ. |
| (ಆ) | ಅನಧಿಕೃತ ವಿನ್ಯಾಸಗಳ ಸಕ್ರಮೀಕರಣ ಮತ್ತು ಭೂ ದಾಖಲೆಗಳ ಸಕಾಲಿಕ ನವೀಕರಣ ಮತ್ತು ನಿರ್ವಹಣೆ (ಬಿ ಖಾತ' ಸಕ್ರಮೀಕರಣ ಮತ್ತು 'ಪೌತಿ ಖಾತ' ನವೀಕರಣಗಳಂತೆ) ಕುರಿತು ನವೀಕರಣಗಳು ಯಾವವು; | ಬಿ ಖಾತ ಸಕ್ರಮೀಕರಣವು ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿರುತ್ತದೆ.<br><br>ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ, ಪಹಣಿಗಳಲ್ಲಿ ಪೌತಿ ಖಾತೆ ದಾಖಲಿಸಲು ಕರ್ನಾಟಕ ಭೂಕಂದಾಯ ಕಾಯ್ದೆ, 1964ರ ಕಲಂ 128ರಲ್ಲಿ ಅವಕಾಶವಿರುತ್ತದೆ. ಅದರಂತೆ ಪೌತಿ ಖಾತೆಗಳ ತ್ವರಿತ ವಿಲೇವಾರಿಗಾಗಿ ಕರ್ನಾಟಕ ಭೂಕಂದಾಯ ನಿಯಮಗಳು, 1966ರ ನಿಯಮ 64ಕ್ಕೆ ತಿದ್ದುಪಡಿ ತರುವ ಮೂಲಕ ಪೌತಿ ಖಾತೆಗೆ ಇರುವ ನೋಟೀಸು ಅವಧಿಯನ್ನು 30 ದಿನಗಳಿಂದ 15 ದಿನಗಳಿಗೆ ಇಳಿಸಲಾಗಿರುತ್ತದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 33 ಟಿಆರ್‌ಎಂ 2019(ಇ), ದಿನಾಂಕ: 17.10.2020 ಮತ್ತು ತಿದ್ದುಪಡಿ ಸುತ್ತೋಲೆ ಸಂಖ್ಯೆ: ಕಂಇ 33 ಟಿಆರ್‌ಎಂ 2019(ಇ), ದಿನಾಂಕ: 10.01.2024ರಂತೆ ಪೌತಿ / ವಾರಸಾ ಖಾತೆ ಆಂದೋಲನವನ್ನು ನಡೆಸಲು ಸರ್ಕಾರದ ವತಿಯಿಂದ ಸುತ್ತೋಲೆಗಳನ್ನು ಹೊರಡಿಸಲಾಗಿದ್ದು, ಅದರಂತೆ ಪೌತಿ ಖಾತೆಗಾಗಿ ಅರ್ಜಿಗಳನ್ನು ಸ್ವೀಕರಿಸಲು ಭೂಮಿ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ ಹಾಗೂ ಪೌತಿ ಖಾತೆಗೆ ಅರ್ಜಿ ಸ್ವೀಕರಿಸಲು ಬೇಕಾದ ದಾಖಲೆಗಳನ್ನು ಕೂಡ ಸರಳೀಕರಣಗೊಳಿಸಲಾಗಿದೆ.<br><br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಕಂಇ 95 ಎಂಆರ್‌ಆರ್ 2025 ದಿನಾಂಕ:21-04-2025 ರಂತೆ ಮರಣ ಹೊಂದಿದ ಖಾತೆದಾರರ ವಾರಸುದಾರರ ಹೆಸರಿಗೆ ಖಾತಾ ಪಹಣಿ ಇಂಡೀಕರಣ ಮಾಡುವ ನಿಟ್ಟಿನಲ್ಲಿ, ಕಂದಾಯ ಇಲಾಖೆಯ ಮೂಲಕ ಇ-ಪೌತಿ ತಂತ್ರಾಂಶವನ್ನು ನೀಡಲಾಗಿರುತ್ತದೆ. ಸದರಿ ತಂತ್ರಾಂಶದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ಮರಣ ಹೊಂದಿದ ವಾರಸುದಾರರ e-KYC ಪಡೆಯುವ ಮುಖಾಂತರ ವಂಶವೃಕ್ಷ ಹಾಗೂ ಮರಣ ಪ್ರಮಾಣ ಪತ್ರ & ಇತರೆ ದಾಖಲಾತಿಗಳನ್ನು ಪಡೆದು ಪೌತಿ ಖಾತೆ ಮಾಡಲು ಕ್ರಮವಹಿಸಲಾಗುತ್ತಿದೆ. ತ್ವರಿತವಾಗಿ |

| | | |
|---|---|---|
| | | ಪ್ರಕರಣಗಳನ್ನು ವಿಲೇವಾರಿ ಮಾಡಲು ಇ-ಪೌತಿ MOBILE APP ಜೊತೆಗೆ ಇ-ಪೌತಿ ವೆಬ್ ಅಪ್ಲಿಕೇಷನ್ ಸಹ ನೀಡಲಾಗಿರುತ್ತದೆ. |
| (ಇ) | ಅನಧಿಕೃತ ಸಾಗುವಳಿಯನ್ನು ಸಕ್ರಮಗೊಳಿಸಲು ಇರುವ ನಿಯಮಗಳೇನು ಮತ್ತು ಪ್ರಕೃತಿ ವಿಕೋಪಗಳಿಂದ ಖಾಸಗಿ ಜಮೀನುಗಳು ಹಾನಿಗೊಳಗಾದರೆ ಪರಿಹಾರ ನೀಡಲು ಸರ್ಕಾರದ ನೀತಿಗಳು ಯಾವವು? | ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮಗೊಳಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಎ, 94ಬಿ ಹಾಗೂ 94ಎ(4)ರಡಿ ಕ್ರಮವಾಗಿ ನಮೂನೆ 50, 53 ಹಾಗೂ 57ರಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br><br>ನಮೂನೆ-50, 53 ಹಾಗೂ 57ರಡಿ ಸ್ವೀಕರಿಸಿರುವ ಅರ್ಜಿಗಳನ್ನು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮದ ಅಧ್ಯಾಯ XIII-ಎ ರಲ್ಲಿ ನಿರ್ದಿಷ್ಟ ಪಡಿಸಿರುವ ಭೂಮಿಯ ಅನಧಿಕೃತ ಅಧಿಭೋಗವನ್ನು ಸಕ್ರಮಗೊಳಿಸಲು ಇರುವ ಮಾನದಂಡಗಳನ್ನು ಅನುಸರಿಸಿ ನಿಯಮಾನುಸಾರ ಪರಿಶೀಲಿಸಿ ಅರ್ಹ ಅರ್ಜಿಗಳನ್ನು ಸಾಗುವಳಿ ಸಕ್ರಮೀಕರಣ ಸಮಿತಿಯ ಮುಂದೆ ಮಂಡಿಸಲಾಗುತ್ತಿದೆ.<br><br>ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 94-ಎ, 94-ಬಿ ಹಾಗೂ 94-ಎ(4)ರಂತೆ ಬಾಕಿ ಇರುವ ನಮೂನೆ 50, 53 ಹಾಗೂ 57ರ ಅರ್ಜಿಗಳನ್ನು ಬಗರ್ ಹುಕುಂ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದ್ದು, ಈ ಕುರಿತು ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 45 ಎಲ್‌ಜಿಪಿ 2023, ದಿನಾಂಕ:01.12.2023ರಂತೆ ಸೂಚನೆಗಳನ್ನು ನೀಡಲಾಗಿರುತ್ತದೆ.<br><br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108 (ಎಫ್)ರನ್ವಯ ಅರ್ಜಿದಾರನು ಅರ್ಹತೆಯನ್ನು ಹೊಂದಿರಬೇಕಾಗಿರುತ್ತದೆ.<br><br>ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108 (ಐ)ರಲ್ಲಿ ಉಲ್ಲೇಖಿಸಿರುವಂತೆ ವಿಶೇಷ ಉದ್ದೇಶಗಳಿಗಾಗಿ ಕಾಯ್ದಿರಿಸಿರುವ ಜಮೀನುಗಳು ಮತ್ತು ದೇವರಕಾಡು, ಉರ್ದುವೆ, ಗುಂಡುತೋಪು, ಕೆರೆಯ ತಳಪಾಯ, ಪೋಟ್ ಖರಾಬ್, ಹಳ್ಳ, ಸ್ಮಶಾನಗಳ ಜಮೀನುಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.<br><br>ಮೇಲ್ಕಂಡ ನಿಯಮಗಳು ಹಾಗೂ ಸುತ್ತೋಲೆಯಲ್ಲಿ ತಿಳಿಸಿರುವ ಮಾನದಂಡಗಳನ್ನು ಪೂರೈಸದ ಹಾಗೂ ಅರಣ್ಯ ಜಮೀನುಗಳು, ಕುಮ್ಕಿ, ಕೆರೆ, ಕಟ್ಟೆ, ಕುಂಟೆ ಹಾಗೂ ಇತರ |

| | | |
|---|---|---|
| | | ಜಲಮೂಲ ಜಲಕಾಯ ಜಮೀನುಗಳನ್ನು ಮಂಜೂರು ಮಾಡಲು ಸಲ್ಲಿಸಿರುವ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108ಸಿ, 108ಸಿಸಿ ಹಾಗೂ 108ಸಿಸಿಸಿ ರಡಿ ಜಿಲ್ಲಾಧಿಕಾರಿಯವರು ಅಧಿಕಾರವನ್ನು ಹೊಂದಿರುತ್ತಾರೆ.<br><br>ಕಾಯ್ದೆ ಮತ್ತು ನಿಯಮಗಳಲ್ಲಿರುವ ಅವಕಾಶದಂತೆ ಪರಿಶೀಲಿಸಿ ಅರ್ಹ ಅರ್ಜಿಗಳನ್ನು ಸಮಿತಿಯ ಮುಂದೆ ಮಂಡಿಸಲಾಗುತ್ತಿದೆ ಹಾಗೂ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಜಿಲ್ಲಾಧಿಕಾರಿಯವರಿಗೆ ಅವಕಾಶವಿದ್ದು ತಿರಸ್ಕರಿಸಿದ ಪ್ರಕರಣಗಳಲ್ಲಿ ಅರ್ಜಿದಾರರಿಗೆ ಹಿಂಬರಹವನ್ನು ನೀಡಲಾಗುತ್ತಿದೆ.<br><br>ಪ್ರಕೃತಿ ವಿಕೋಪಗಳಿಂದ ಖಾಸಗಿ ಜಮೀನುಗಳು ಹಾನಿಗೊಳಗಾದರೆ ಪರಿಹಾರ ನೀಡುವ ಕುರಿತು ಸರ್ಕಾರವು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 82ಕ್ಕೆ ತಿದ್ದುಪಡಿ ಮಾಡಿ ಅವಕಾಶ ಕಲ್ಪಿಸಲಾಗಿದೆ.<br><br>ಅಲ್ಲದೇ, ಪ್ರಕೃತಿ ವಿಕೋಪಗಳಿಂದ ಖಾಸಗಿ ಕೃಷಿ ಜಮೀನುಗಳಲ್ಲಿನ ಬೆಳೆ ಹಾನಿಯಾದಲ್ಲಿ ಕೇಂದ್ರ ಗೃಹ ಮಂತ್ರಾಲಯದ NDRF/SDRF ಮಾರ್ಗಸೂಚಿಗಳನ್ವಯ ಪರಿಹಾರ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. |

**ಕಡತ ಸಂಖ್ಯೆ: ಕಂಇ 185 ಟಿಆರ್‌ಎಂ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು